# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 553 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಶಾಲಾ ಮಕ್ಕಳ ಆರೋಗ್ಯ ತಪಾಸಣೆಗಾಗಿ ಸರ್ಕಾರವು ಆಯವ್ಯಯದಲ್ಲಿ 2022-23ಕ್ಕೆ ನಿಗದಿಪಡಿಸಿರುವ ಮೊತ್ತವೆಷ್ಟು ಮತ್ತು ಇಲ್ಲಿಯವರೆಗೆ ಬಳಕೆ ಮಾಡಲಾದ ಮೊತ್ತ ಎಷ್ಟು; | ಶಾಲಾ ಮಕ್ಕಳ ಆರೋಗ್ಯ ತಪಾಸಣೆ ಚಟುವಟಿಕೆಗಳಿಗಾಗಿ ಭಾರತ ಸರ್ಕಾರದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಅನುಷ್ಠಾನ ಗೊಳಿಸಲಾಗಿರುವ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮಕ್ಕೆ 2022-23ನೇ ಸಾಲಿಗೆ ಒಟ್ಟು ರೂ.1946.40/- ಲಕ್ಷಗಳ ಅನುದಾನವನ್ನು ಒದಗಿಸಲಾಗಿದ್ದು, ಡಿಸೆಂಬರ್-22ರ ಅಂತ್ಯಕ್ಕೆ ರೂ.911.63/- ಲಕ್ಷಗಳ ಅನುದಾನವು ಬಳಕೆಯಾಗಿರುತ್ತದೆ. |
| ಆ) | ಶಾಲಾ ಮಕ್ಕಳಿಗೆ ವರ್ಷದಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಆರೋಗ್ಯ ತಪಾಸಣೆ ಮಾಡುವ ಕುರಿತು ಸರ್ಕಾರವು ಆಲೋಚಿಸಿದೆಯೇ; | ಶಾಲಾ ಮಕ್ಕಳಿಗೆ ವರ್ಷದಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಆರೋಗ್ಯ ತಪಾಸಣೆ ಮಾಡುವ ಕುರಿತಾದ ವಿಚಾರವು ಸರ್ಕಾರದ ಆಲೋಚನೆಯಲ್ಲಿದ್ದು, ಇದಕ್ಕಾಗಿ ಹೆಚ್ಚಿನ ತಂಡಗಳ ಬೇಡಿಕೆಗಾಗಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಕೇಂದ್ರ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಲಾಗುವುದು. |
| ಇ) | ಶಾಲಾ ಮಕ್ಕ ಆರೋಗ್ಯ ತಪಾಸಣೆಗಾಗಿ ಸಂಬಂಧಿಸಿದ ಇಲಾಖೆಯು ಶಿಕ್ಷಣ ಇಲಾಖೆಯೊಂದಿಗೆ ಮಾಡಿಕೊಂಡಿರುವ ಒಪ್ಪಂದದ ವಿವರಗಳನ್ನು ನೀಡುವುದು. | ಶಿಕ್ಷಣ ಇಲಾಖೆಯೊಂದಿಗೆ ಪ್ರತ್ಯೇಕವಾದ ಒಪ್ಪಂದಗಳು ಇರುವುದಿಲ್ಲ. |
| ಈ) | ಶಾಲಾ ಮಕ್ಕಳ ಆರೋಗ್ಯ ತಪಾಸಣೆಯಲ್ಲಿ ಕಂಡುಬರುವ ಅನಾರೋಗ್ಯದ ಪ್ರಕರಣಗಳನ್ನು ನಿರ್ವಹಿಸಲು ಸರ್ಕಾರವು ಮಾಡಿಕೊಂಡಿರುವ ಯೋಜನೆಗಳಾವುವು? | ಶಾಲಾ ಮಕ್ಕಳ ಆರೋಗ್ಯ ತಪಾಸಣೆಯಲ್ಲಿ ಕಂಡುಬರುವ ಅನಾರೋಗ್ಯದ ಪ್ರಕರಣಗಳ ಹೆಚ್ಚಿನ ಚಿಕಿತ್ಸೆಗಾಗಿ ಸರ್ಕಾರದ ಆರೋಗ್ಯ ಕೇಂದ್ರಗಳಿಗೆ ಕಳುಹಿಸಿಕೊಡಲಾಗುತ್ತದೆ. ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ ಮತ್ತು ಆಯುಷ್ಮಾನ್ ಭಾರತ್-ಆರೋಗ್ಯ ಕರ್ನಾಟಕ ಯೋಜನೆಗಳಡಿಯಲ್ಲಿ ಫಲಾನುಭವಿಗಳಿಗೆ ಅಗತ್ಯವಿರುವ ವೈದ್ಯಕೀಯ ಮತ್ತು ಶಸ್ತ್ರ ಚಿಕಿತ್ಸೆಯಂತಹ ಸೇವೆಗಳನ್ನು ಒದಗಿಸಲಾಗುತ್ತಿದೆ. |

ಆಕುಕ 29 ಎಸ್ ಬಿವಿ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು